ಆ) ಈ ಕೊಳಚೆ ಪ್ರದೇಶದವರಿಗೆ ಪುನರ್ವಸತಿ ನಿರ್ಮಾಣ ಮಾಡುವ ಉದ್ದೇಶ ಸರ್ಕಾರದ ಗಮನಕ್ಕೆ ಬಂದಿದೆಯೇ?

ಸದ್ಯಕ್ಕೆ ಈ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಉದ್ಭವಿಸುವುದಿಲ್ಲ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (484)289
ಸದಸ್ಯರ ಹೆಸರು : ಶ್ರೀ ಆರ್.ಧ್ರುವನಾರಾಯಣ್ (ಕೊಳ್ಳೇಗಾಲ)
ಉತ್ತರಿಸುವ ಸಚಿವರ ಹೆಸರು : (ಶ್ರಿ ಎಸ್.ಎನ್.ಕೃಷ್ಣಯ್ಯ ಶೆಟ್ಟಿ) ಮಾನ್ಯ ವಸತಿ ಮತ್ತು ಮುಜರಾಯಿ ಸಚಿವರು

ಅ) ಸರ್ಕಾರ ಆಶ್ರಯ ಯೋಜನೆಯ ಫಲಾನುಭವಿಗಳಿಗೆ ರೂ.30,000/– ಹಾಗೂ ಡಾ: ಅಂಬೇಡ್ಕರ್ ಆವಾಸ್ ಮನೆ ಫಲಾನುಭವಿಗಳಿಗೆ ರೂ.25,000/– ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು

ಆ) ಹಾಗಿದ್ದಲ್ಲಿ ಡಾ: ಅಂಬೇಡ್ಕರ್ ಮನೆಯ ಫಲಾನುಭವಿಗಳಿಗೆ ಅನುದಾನವನ್ನು ಹೆಚ್ಚಿಸುವ ಉದ್ದೇಶ ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಸರ್ಕಾರವು, 2007–08ನೇ ಸಾಲಿನಿಂದ ಡಾ: ಅಂಬೇಡ್ಕರ್ ಅಭಿವೃದ್ಧಿ ಯೋಜನೆಯ ಘಟಕ ವೆಚ್ಚವನ್ನು ರೂ.30,000/– ಕ್ಕೆ ಹೆಚ್ಚಿಸಲು ಮಂಜೂರಾತಿ ನೀಡಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (332)290
ಸದಸ್ಯರ ಹೆಸರು : ಡಾ: ಸುಧಾಕರ್ ಎಂ.ಸಿ
ಉತ್ತರಿಸುವ ಸಚಿವರು : (ಶ್ರೀ ಅರವಿಂದ ಲಿಂಬಾವಳಿ) ಮಾನ್ಯ ಉನ್ನತ ಶಿಕ್ಷಣ ಸಚಿವರು.

ಅ) ಚಿಂತಾಮಣಿ ತಾಲ್ಲೂಕಿನ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಭೋದಕರು ಹಾಗೂ ಭೋದಕೇತರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಹೌದು

ಆ) ಹಾಗಿದ್ದಲ್ಲಿ, ಈ ಖಾಲಿ ಹುದ್ದೆಗಳಿಂದಾಗಿ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗಿರುವುದು ನಿಜವೇ;